ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 10 ನೇ ಮಾರ್ಚ್, 2020

ಕಲ್ಯಾಣ ಕರ್ನಾಟಕ ಭಾಗದ ತೊಗರಿ ಬೆಳೆಯನ್ನು ಖರೀದಿಸುವ ಕುರಿತು

ಶ್ರೀ ವಿಜಯ್ ಸಿಂಗ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

550 (743) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲ್ಯಾಣ ಕರ್ನಾಟಕ ಭಾಗದ ಮುಖ್ಯ ಬೆಳೆಯಾದ ತೊಗರಿ ಬೆಳೆಯನ್ನು ರೈತರಿಂದ ಖರೀದಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ; ಇದುವರೆಗೆ ಎಷ್ಟು ಕ್ವಿಂಟಾಲ್ ತೊಗರಿ ಬೆಳೆಯನ್ನು ರೈತರಿಂದ ಖರೀದಿ ಮಾಡಲಾಗಿದೆ ;

(ಆ) ರೈತರಿಂದ ಖರೀದಿ ಮಾಡಿದ ತೊಗರಿಬೆಳೆಗೆ ಸಮರ್ಪಕವಾಗಿ ಹಣ ಸಂದಾಯ ಮಾಡಲಾಗುತ್ತಿದೆಯೇ; ಇದುರವರೆಗೆ ಎಷ್ಟು ಹಣವನ್ನು ರೈತರಿಗೆ ಪಾವತಿಸಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ರೈತರಿಂದ ತೊಗರಿ ಬೆಳೆಯನ್ನು ಖರೀದಿಸಲು ಸರ್ಕಾರ ಯಾವ ಮಾನದಂಡಗಳನ್ನು ಅನುಸರಿಸುತ್ತಿದೆ ; ಇದರಿಂದ ರೈತರಿಗೆ ಅನುಕೂಲವಾಗುತ್ತಿದೆಯೇ ; ಆಗದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ?